# “ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಚಿನ್ನದ ಪದಕ”

ಇತ್ತೀಚೆಗೆ ಶಿವಮೊಗ್ಗದಲ್ಲಿ ನಡೆದ 3ನೇ ಅಂತರರಾಷ್ಟ್ರೀಯ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಹಾಸನ ನಗರದ ರಾಜೀವ್ ತಾಂತ್ರಿಕ ಮಹಾವಿದ್ಯಾಲಯದ ಸಿವಿಲ್ ಇಂಜನಿಯರಿಂಗ್ 5ನೇ ಸೆಮಿಸ್ಟರ್‌ನ ವಿದ್ಯಾರ್ಥಿನಿಯಾದ ಅನುಷ ಹೆಚ್. ಇವರು ಭಾಗವಹಿಸಿ ವೈಯಕ್ತಿಕ ಕಟಾ ಮತ್ತು ಕುಮಿಟೆಯ ಬ್ಲಾಕ್ ಬೆಲ್ಟ್ ವಿಭಾಗದಲ್ಲಿ 2 ಚಿನ್ನದ ಪದಕಗಳನ್ನು ಗಳಿಸಿ ಕಾಲೇಜಿಗೆ ಕೀರ್ತಿ ತಂದಿರುತ್ತಾರೆ. ಈ ವಿದ್ಯಾರ್ಥಿನಿಯನ್ನು ಕಾಲೇಜಿನ ಆಡಳಿತ ಮಂಡಳಿಯವರು, ಪ್ರಾಂಶುಪಾಲರು, ಸಿವಿಲ್ ವಿಭಾಗದ ಮುಖ್ಯಸ್ಥರು, ದೈಹಿಕ ಶಿಕ್ಷಣ ನಿರ್ದೇಶಕರು ಮತ್ತು ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಅಭಿನಂದಿಸಿರುತ್ತಾರೆ.

